ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.

ಸಿ.ಸಿ.ನಂಃ 242/2014 ಸಿ.ಡಬ್ಲ್ಯೂ –3 ಪಿ.ಡಬ್ಲ್ಯೂ -4

| | | |
|---|---|---|
| ಹೆಸರು | ಃ | ಬಸಣ್ಣ |
| ತಂದೆ | ಃ | ಈರಪ್ಪಾ |
| ವಯಸ್ಸು | ಃ | ೬೪ ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | ಃ | ಕುಡಕಿ |

ದಿನಾಂಕಃ೩೧.೦೫.೨೦೨೪

ಸತ್ಯ ಪ್ರತಿಜ್ಞೆಯ ಮೇರೆ ಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದ**

ಆರೋಪಿತರ ಪರಿಚಯ ಇರುತ್ತದೆ. ಚಾಸಾ-1, 2, 4 ರಿಂದ 7 ರವರ ಪರಿಚಯ ಇರುತ್ತದೆ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿರುವುದಿಲ್ಲ, ಮುದ್ದೇ ಮಾಲುಗಳನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ. ಪೋಲಿಸರು ಒಂದು ದಾಖಲೆಗೆ ಸಹಿ ಮಾಡು ಎಂದು ಹೇಳಿದಕ್ಕೆ ಹೆಬ್ಬೆಟ್ಟಿನ ಗುರುತನ್ನು ಮಾಡಿರುತ್ತೇನೆ. ಸಾಕ್ಷಿಯು ನಿಪಿ-2 ರಲ್ಲಿರುವ ತನ್ನ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿರುತ್ತಾರೆ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

**ಪಾಟೀ ಸವಾಲು ಃ ಸ.ಸ.ಅ. ವಕೀಲರಿಂದ.**

ಈಗ ಓದಿ ಹೇಳಿದ ಹಾಗೆ ನನ್ನ ಮತ್ತು ಚಾಸಾ-೨ ರವರ ಸಮಕ್ಷಮ ಪೋಲಿಸರು ಪಂಚನಾಮೆ ಜರುಗಿಸಿ ಮುದ್ದೇ ಮಾಲುಗಳನ್ನು ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿ ಅಲ್ಲ. ಪಂಚನಾಮೆ ಜರುಗಿಸಿ ಹೆಬ್ಬೆಟ್ಟಿನ ಗುರುತನ್ನು ಪಡೆದುಕೊಂಡಿದ್ದರು ಪಂಚನಾಮೆ ಜರುಗಿಸಿಲ್ಲ ಎಂದು ಆರೊಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಧರೆ ಸರಿ ಅಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಎಸ್.ಎ.ಕೆ. ವಕೀಲರಿಂದ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುವುದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ-** ಇರುವುದಿಲ್ಲ.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂ ದ